# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 688 |
| ಸದಸ್ಯರ ಹೆಸರು | : | ಶ್ರೀ. ಪ್ರತಾಪ್ ಸಿಂಹ ನಾಯಕ್ ಕೆ. (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | : | 12.12.2025. |

******

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಮಕ್ಕಳ ಮೇಲೆ ನಡೆಯುತ್ತಿರುವ ದೌರ್ಜನ್ಯ ಪ್ರಕರಣಗಳ ಸಂಖ್ಯೆ ವರ್ಷದಿಂದ ವರ್ಷಕ್ಕೆ ಸತತವಾಗಿ ಹೆಚ್ಚುತ್ತಲೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, ಸರ್ಕಾರದ ಗಮನಕ್ಕೆ ಬಂದಿರುತ್ತದೆ.<br><br>ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಲ್ಲಿ ಮಕ್ಕಳಿಗೆ ಸಂಬಂಧಿಸಿದಂತೆ ದೌರ್ಜನ್ಯ ಪ್ರಕರಣಗಳು (ಆರ್.ಟಿ.ಇ, ನಾಪತ್ತೆ ಪ್ರಕರಣ, ಜೆ.ಜೆ.ಅಧಿನಿಯಮ, ಪೋಕ್ಸೊ ಕಾಯ್ದೆ) ಪ್ರಕರಣಗಳು ದಾಖಲಾಗುತ್ತಿವೆ. |
| ಆ) | ಬಂದಿದ್ದಲ್ಲಿ, ಕಳೆದ 2 ವರ್ಷಗಳಲ್ಲಿ ಮಕ್ಕಳ ಸಹಾಯವಾಣಿಗೆ ಬಂದ ಒಟ್ಟು ಕರೆಗಳ ಸಂಖ್ಯೆ ಎಷ್ಟು ಮತ್ತು ದಾಖಲಾಗಿರುವ ವಿವಿಧ ರೀತಿ ದೌರ್ಜನ್ಯದ ಪ್ರಕರಣಗಳು ಎಷ್ಟು: (ವಿವರ ನೀಡುವುದು) | ಕಳೆದ 2 ವರ್ಷಗಳಲ್ಲಿ ಮಕ್ಕಳ ಸಹಾಯವಾಣಿಗೆ ಬಂದ ಒಟ್ಟು ಕರೆಗಳ ಸಂಖ್ಯೆ-6,22,177 ಈ ಪೈಕಿ ಮಕ್ಕಳ ಮೇಲೆ ವಿವಿಧ ರೀತಿ ದೌರ್ಜನ್ಯದಿಂದ ದಾಖಲಾಗಿರುವ ಪ್ರಕರಣಗಳ ಸಂಖ್ಯೆ:18,203<br><br>ವಿವರ ಈ ಕೆಳಕಂಡಂತೆ ಇದೆ.<br><br>• ಬಾಲ್ಯ ವಿವಾಹ: 8,171<br>• ಬಾಲ ಕಾರ್ಮಿಕ: 2,864<br>• ಬಾಲ ಭಿಕ್ಷಾಟನೆ: 4,444<br>• ಕಾಣೆಯಾದ ಮಕ್ಕಳು: 2,602<br>ಮಕ್ಕಳ ಅನೈತಿಕ ಸಾಗಾಣಿಕೆ:122 |
| ಇ) | ಸದರಿ ದಾಖಲಾಗಿರುವ ವಿವಿಧ ರೀತಿಯ ದೌರ್ಜನ್ಯದ ಪ್ರಕರಣಗಳಲ್ಲಿ ವಿಲೇವಾರಿಯಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಹಾಗೂ ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು: | **ಮಕ್ಕಳ ರಕ್ಷಣಾ ನಿರ್ದೇಶನಾಲಯ:-**<br>ವಿಲೇವಾರಿಯಾಗಿರುವ ಪ್ರಕರಣಗಳ ಸಂಖ್ಯೆ:15,988 ಹಾಗೂ ಪ್ರಗತಿಯಲ್ಲಿರುವ ಪ್ರಕರಣಗಳ ಸಂಖ್ಯೆ:2,215<br><br>ಏಪ್ರಿಲ್ 2024 ರಿಂದ ಮಾರ್ಚ್-2025 ನೇ ಸಾಲಿನ ಹಾಗೂ ಏಪ್ರಿಲ್ -2025 ರಿಂದ ಅಕ್ಟೋಬರ್- 2025ರವರೆಗೆ ಆಯೋಗದಲ್ಲಿ ದಾಖಲಾದ ಪ್ರಕರಣಗಳ ವಿವರ.<br><br>ಕ್ರ.ಸಂ \| ಸ್ವೀಕೃತಿ \| ಮುಕ್ತಾಯ \| ಚಾಲ್ತಿ<br>1 \| 477 \| 119 \| 358 |
| ಈ) | ದೀರ್ಘಕಾಲದಿಂದ ಹಲವಾರು ಪ್ರಕರಣಗಳು ಬಾಕಿ ಇರಲು ಕಾರಣಗಳೇನು; ಯಾವ ಕಾಲಮಿತಿಯೊಳಗೆ, | **ಮಕ್ಕಳ ರಕ್ಷಣಾ ನಿರ್ದೇಶನಾಲಯ:-**<br><br>• ದಾಖಲಾಗಿರುವ ಪ್ರಕರಣಗಳಲ್ಲಿ ಹಲವು ಕರೆಗಳು ನಕಲಿ ಕರೆಗಳಾಗಿದ್ದು, ಇದನ್ನು ಪರಿಶೀಲಿಸಿ ಅಸಲಿ ಕರೆಗಳ ಬಗ್ಗೆ |

| | | |
|---|---|---|
| | ಬಾಕಿ ಇರುವ ಸದರಿ ಪ್ರಕರಣಗಳನ್ನು ವಿಲೇವಾರಿ ಮಾಡಲಾಗುವುದು; | ಕ್ರಮವಹಿಸಲು ಸಂಬಂಧಪಟ್ಟ ಪ್ರಾಧಿಕಾರಗಳಿಗೆ ಕಳುಹಿಸಲಾಗುತ್ತಿದೆ.<br>• 2023-24 ಮತ್ತು2024-25ನೇ ಸಾಲಿನಲ್ಲಿ ದಾಖಲಾದ ಯಾವುದೇ ಪ್ರಕರಣಗಳು ಬಾಕಿಯಿರುವುದಿಲ್ಲ. ಮುಂದುವರೆದು, ಬಾಕಿ ಪ್ರಕರಣಗಳು 2215 ಏಪ್ರಿಲ್ ಮಾಹೆಯಿಂದ ನವೆಂಬರ್ ಮಾಹೆಯವರೆಗೆ ದಾಖಲಾಗಿರುವ ಪ್ರಕರಣಗಳಾಗಿರುತ್ತವೆ. ಸದರಿ ಪ್ರಕರಣಗಳನ್ನು ಸಕಾಲದಲ್ಲಿ/ ಆದ್ಯತೆಯ ಮೇರೆಗೆ ಮುಕ್ತಾಯಗೊಳಿಸಲು ಕ್ರಮವಹಿಸಲಾಗುತ್ತಿದೆ.<br><br>ಮಕ್ಕಳ ಸಹಾಯವಾಣಿಗೆ ಸ್ವೀಕೃತವಾಗುವ ಕರೆಗಳಲ್ಲಿ ಹಲವಾರು ಕರೆಗಳು ಪೋಕ್ಸೋ ಮತ್ತು ಬಾಲ್ಯವಿವಾಹ ಪ್ರಕರಣಗಳಾಗಿದ್ದು, ಸಾರ್ವಜನಿಕ ಜೀವನದಲ್ಲಿ ಪೋಷಕರು/ ಸಂತ್ರಸ್ಥ ಕುಟುಂಬಸ್ಥರು ತಮ್ಮ ಘನತೆಗೆ ಪ್ರತಿಕೂಲ ಪರಿಣಾಮ ಬೀರುತ್ತದೆ ಎಂದು ಪರಿಭಾವಿಸಿ ಸೂಕ್ತ ರೀತಿಯಲ್ಲಿ ಸ್ಪಂದಿಸದೇ ಇರುವುದರಿಂದ ಪ್ರಕರಣಗಳು ಬಾಕಿಯಿರುತ್ತವೆ.<br><br>**ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ:-**<br><br>ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದಲ್ಲಿ ದಾಖಲಾದ ಎಲ್ಲಾ ಪ್ರಕರಣಗಳನ್ನು ಶೀಘ್ರವಾಗಿ ಇತ್ಯರ್ಥ ಪಡಿಸಲು ಆಯೋಗದ ಅಧ್ಯಕ್ಷರು ಮತ್ತು ಸದಸ್ಯರು ವಿಚಾರಣೆ ಹಾಗೂ ಕ್ಷೇತ್ರ ಭೇಟಿ ಮಾಡುವುದರ ಮೂಲಕ ಕಾಲಮಿತಿಯೊಳಗೆ ಇತ್ಯರ್ಥ ಪಡಿಸಲಾಗುತ್ತಿದೆ. |
| ಉ) | ರಾಜ್ಯದಲ್ಲಿ, ಮಕ್ಕಳ ಸುರಕ್ಷತೆ ಹಾಗೂ ರಕ್ಷಣೆಗೆ ಆದ್ಯತೆ ನೀಡುವ ಸಲುವಾಗಿ ಸರ್ಕಾರ ಯಾವೆಲ್ಲಾ ಕ್ರಮಗಳನ್ನು ಕೈಗೊಂಡಿದೆ? (ಸಂಪೂರ್ಣ ವಿವರ ನೀಡುವುದು) | **ಮಕ್ಕಳ ರಕ್ಷಣಾ ನಿರ್ದೇಶನಾಲಯ:-**<br><br>• ರಾಜ್ಯದ ಎಲ್ಲಾ ಶಾಲಾ-ಕಾಲೇಜು ವಸತಿ ನಿಲಯ ಹಾಗೂ ತರಬೇತಿ ಸಂಸ್ಥೆಗಳಲ್ಲಿ ಮಕ್ಕಳ ಹಕ್ಕುಗಳು ಬಾಲಗರ್ಭಿಣಿ, ಪೋಕ್ಸೋ, ಬಾಲ್ಯವಿವಾಹ ಹಾಗೂ ಮಕ್ಕಳ ಸಹಾಯವಾಣಿ-1098 ಮಕ್ಕಳಿಗೆ ಅರಿವು ಜಾಗೃತಿ ಮೂಡಿಸುವ ಕುರಿತು ವಿವಿಧ ಇಲಾಖೆಗಳು ನಿಗಾವಹಿಸಬೇಕಾದ ಆದ್ಯತೆಯ ಅಂಶಗಳ ಕುರಿತು 07 ಇಲಾಖೆಗಳಿಂದ ದಿನಾಂಕ:13.10.2025 ರಂದು ಜಂಟಿ ಸುತ್ತೋಲೆಯನ್ನು ಹೊರಡಿಸಲಾಗಿದೆ.<br>• ಮಕ್ಕಳ ಪಾಲನಾ ಕೇಂದ್ರಗಳಲ್ಲಿ ದಾಖಲಾಗುವ ಬಾಲಗರ್ಭಿಣಿ/ ಬಾಲತಾಯಿ ಮತ್ತು ನವಜಾತ ಶಿಶುವಿಗೆ ಸಂಬಂಧಿಸಿದಂತೆ ಪಾಲಿಸಬೇಕಾದ ಕ್ರಮಬದ್ಧ ಕಾರ್ಯ ವಿಧಾನ (SOP)ವನ್ನು ದಿನಾಂಕ:02.09.2025 ರಂದು ಹೊರಡಿಸಲಾಗಿದೆ.<br>• ಅಪ್ರಾಪ್ತ ವಯಸ್ಸಿನ ಮಕ್ಕಳ ಮೇಲೆ ನಡೆಯುವ ಯಾವುದೇ ರೀತಿಯ ದೌರ್ಜನ್ಯವನ್ನು ತಡೆಗಟ್ಟಲು ಮತ್ತು ರಕ್ಷಣೆ ನೀಡಿ ನ್ಯಾಯ ಒದಗಿಸಲು ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ತಡೆ (ದೌರ್ಜನ್ಯ) ಕಾಯ್ದೆ-2012 ಗಳನ್ನು ಅನುಷ್ಠಾನಗೊಳಿಸಲಾಗಿದೆ.<br>• ಮಕ್ಕಳ ಸಹಾಯವಾಣಿಯ (1098) ವ್ಯವಸ್ಥೆಯನ್ನು ಮಾಡಲಾಗಿದೆ. ರಾಜ್ಯದ ಯಾವುದೇ ಸ್ಥಳದಲ್ಲಿ ಯಾವುದೇ ಮಗುವಿಗೆ ಬಾಲ್ಯವಿವಾಹವೂ ಸೇರಿದಂತೆ ಯಾವುದೇ ಸಮಸ್ಯೆಯಾದಲ್ಲಿ ಮಕ್ಕಳ ಸಹಾಯವಾಣಿಗೆ ಅಂದರೆ 1098ಕ್ಕೆ |

ಕರೆಮಾಡಿದಲ್ಲಿ ತಕ್ಷಣ ಮಕ್ಕಳನ್ನು ರಕ್ಷಿಸಲು ಸಂಬಂಧಿಸಿದವರು ಕಾರ್ಯ ಪ್ರವೃತ್ತರಾಗುತ್ತಾರೆ.

- ಆಕಾಶವಾಣಿಯಲ್ಲಿ ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ವಾತ್ಸಲ್ಯವಾಣಿಯೆಂಬ ಕಾರ್ಯಕ್ರಮವು ಬಿತ್ತರಗೊಂಡಿದ್ದು, ಜಾಗೃತಿ ಮೂಡಿಸಲು ಸಹಕಾರಿಯಾಗುತ್ತಿದೆ.
- ಮಕ್ಕಳ ಮೇಲಿನ ದೌರ್ಜನ್ಯ ತಡೆಗಟ್ಟಲು ಮತ್ತು ಪಾಲನೆ ಪೋಷಣೆ ಅವಶ್ಯಕತೆ ಇರುವ ಮಕ್ಕಳ ಸುರಕ್ಷತೆಗಾಗಿ ಪ್ರತಿ ಜಿಲ್ಲೆಯಲ್ಲಿ ಮಕ್ಕಳ ಕಲ್ಯಾಣ ಸಮಿತಿ, ಬಾಲನ್ಯಾಯ ಮಂಡಲಿ, ಎಸ್.ಜೆ.ಪಿ.ಯು, ಜಿಲ್ಲಾ ಮಕ್ಕಳ ರಕ್ಷಣಾ ಘಟಕಗಳು ಕಾರ್ಯ ನಿರ್ವಹಿಸುತ್ತಿವೆ.
- ಬಾಲಗರ್ಭಿಣಿಯರ ಪ್ರಕರಣಗಳಿಗೆ ಸಂಬಂಧಿಸಿದಂತೆ ದಿನಾಂಕ:06.09.2024ರ ಸರ್ಕಾರದ ಆದೇಶದಂತೆ ಅಪ್ರಾಪ್ತ ವಯಸ್ಸಿನ ಹೆಣ್ಣು ಮಕ್ಕಳು ಬಾಲಗರ್ಭಿಣಿಯರಾಗುವುದನ್ನು ಪರಿಣಾಮಕಾರಿಯಾಗಿ ತಡೆಗಟ್ಟಲು ವಿವಿಧ ಇಲಾಖೆಗಳಿಗೆ ಜವಾಬ್ದಾರಿಗಳನ್ನು ನಿಗದಿಪಡಿಸಲಾಗಿದೆ.

ಜಿಲ್ಲಾ, ತಾಲ್ಲೂಕು ಮತ್ತು ಗ್ರಾಮಮಟ್ಟದಲ್ಲಿ ಈ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ.

**ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ:-**

ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಮಕ್ಕಳ ಸುರಕ್ಷತೆ ಹಾಗೂ ರಕ್ಷಣೆಗೆ ಆದ್ಯತೆ ನೀಡುವ ಸಲುವಾಗಿ,

- ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಅಧಿನಿಯಮ 2009.
- ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ಸಂರಕ್ಷಣೆ) ಅಧಿನಿಯಮ 2015.
- ಮಕ್ಕಳನ್ನು ಲೈಂಗಿಕ ಕಿರುಕುಳದಿಂದ ರಕ್ಷಿಸುವ ಕಾಯ್ದೆ 2013.

ಈ ಮೇಲ್ಕಂಡ ಅಧಿನಿಯಮಗಳಿಗೆ ಸಂಬಂಧಿಸಿದಂತೆ ಆಯೋಗದ ಅಧ್ಯಕ್ಷರು ಹಾಗೂ ಸದಸ್ಯರುಗಳು ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಕಾನೂನು ಅರಿವು ಕಾರ್ಯಕ್ರಮ, ಜಿಲ್ಲಾ ಪ್ರಗತಿ ಪರಿಶೀಲನಾ ಸಭೆ ಮತ್ತು ಇಲಾಖೆಗಳ ಪ್ರತ್ಯೇಕ ಪ್ರಗತಿ ಪರಿಶೀಲನಾ ಸಭೆಗಳನ್ನು ಆಯೋಜಿಸಿ ಮಕ್ಕಳ ಸುರಕ್ಷತೆ ಮತ್ತು ರಕ್ಷಣೆಗೆ ಹೆಚ್ಚಿನ ಆದ್ಯತೆಯನ್ನು ನೀಡಲು ಪರಿಣಾಮಕಾರಿಯಾಗಿ ಜಿಲ್ಲಾಡಳಿತಗಳು ಕಾರ್ಯ ನಿರ್ವಹಿಸುವಂತೆ ಆಯೋಗದಿಂದ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಮಮಇ 178 ಮಭಾಬ 2025

**(ಲಕ್ಷ್ಮೀ ಆರ್. ಹೆಬ್ಬಾಳ್ಕರ್)**

ಮಹಿಳಾ ಮತ್ತುಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಹಾಗೂ ಹಿರಿಯ ನಾಗರೀಕರ
ಸಬಲೀಕರಣ ಸಚಿವರು.